D raft 4

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 157(191)

ಸದಸ್ಯರ ಹೆಸರು : ಶ್ರೀ ಎಸ್ . ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 08.12.2020

ಉತ್ತರಿಸಬೇಕಾದ ಸಚಿವರು : ಮಾನ್ಯ ನಗರಾಭಿವೃದ್ಧಿ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ನಗರ ರಿಂಗ್ ರಸ್ತೆಯ ಎರಡೂ ಬದಿಯಲ್ಲಿ ಅಲ್ಲಿಲ್ಲಿ ತ್ಯಾಜ್ಯದ ರಾಶಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ನಗರದ ಸಾರ್ವಜನಿಕರ ಆರೋಗ್ಯಕ್ಕೆ, ಸೌಂದರ್ಯಕ್ಕೆ ಹಾನಿ ಉಂಟಾಗಿ, ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬಂದಿದೆ. |
| ಆ) | ಕೂಡಲೇ ಈ ತ್ಯಾಜ್ಯ ರಾಶಿಯನ್ನು ತೆಗೆದು ಸ್ವಚ್ಛಗೊಳಿಸಿ, ಪರಿಸರ ನೈರ್ಮಲ್ಯಕ್ಕೆ ನಗರದ ಅಂದಕ್ಕೆ ಗಮನ ಕೊಡಲಾಗುವುದೇ; ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸಿ ತ್ಯಾಜ್ಯವನ್ನು ಸುರಿಯುವವರನ್ನು ಪತ್ತೆ ಹಚ್ಚಿ, ಅವರಿಗೆ ದಂಡ ವಿಧಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ? | ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬಿಸಾಡಬಾರದೆಂದು ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ 65 ವಾರ್ಡ್‌ಗಳಲ್ಲಿ ಮನೆ ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಮಾಡಲಾಗುತ್ತಿದೆ. ಈ ಕಾರ್ಯಕ್ಕಾಗಿ ಎಲ್ಲಾ 65 ವಾರ್ಡ್‌ಗಳಿಗೆ ಟಿಪ್ಪರ್ ವಾಹನಗಳನ್ನು ಒದಗಿಸಲಾಗಿದೆ ಹಾಗೂ ನಾಮಫಲಕಗಳನ್ನು ಸಹ ಅಳವಡಿಸಲಾಗಿದೆ.<br>ಮೈಸೂರು ನಗರದ ರಿಂಗ್ ರಸ್ತೆಗಳಲ್ಲಿ ಸಾರ್ವಜನಿಕರು ತ್ಯಾಜ್ಯವನ್ನು ಸುರಿಯುತ್ತಿರುವುದು ಕಂಡು ಬಂದ ಕಾರಣ ಪಾಲಿಕೆ ವತಿಯಿಂದ ಅಭಯ ತಂಡ ನಿಯೋಜಿಸಿ ಸದರಿ ವ್ಯಕ್ತಿಗಳಿಗೆ ದಂಡ ವಿಧಿಸಲಾಗುತ್ತಿದೆ ಹಾಗೂ ರಾತ್ರಿ ವೇಳೆಯಲ್ಲಿ ತ್ಯಾಜ್ಯ ಸುರಿಯುವವರಿಗೆ ಸಿ.ಸಿ. ಕ್ಯಾಮೆರಾ ಅಳವಡಿಸಿ, ದಂಡ ವಿಧಿಸಲು ಕ್ರಮ ವಹಿಸಲಾಗುತ್ತಿದೆ. |

ನಅಇ 114 ಎಸಿಎಂ 2020 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು